**ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳ ನ್ಯಾಯಾಲಯ, ಸಂಡೂರು**
**ಸಿ.ಸಿ. ನಂ: 53/2024**

| | | | |
|---|---|---|---|
| **ಸಾಕ್ಷಿದಾರರ ಹೆಸರು** | : | **ಹನುಮಂತಪ್ಪ** | **ಪಿ.ಡಬ್ಲ್ಯೂ-02** |
| **ತಂದೆಯ ಹೆಸರು** | : | **ಕಾಶಪ್ಪ** | **ಸಿ.ಡಬ್ಲ್ಯೂ-02** |
| **ವಯಸ್ಸು** | : | **38 ವರ್ಷ** | |
| **ಉದ್ಯೋಗ** | : | **ಚಾಲಕ** | **ಸಾಕ್ಷಿಗೆ ಪ್ರಮಾಣ ವಚನ ಭೋದಿಸಿದ ದಿನಾಂಕಃ 02.06.2026.** |
| **ವಾಸಸ್ಥಳ** | : | **ನಾಗಲಾಪುರ ಗ್ರಾಮ** | |

**ಸಾಕ್ಷಿಯ ಮುಖ್ಯ ವಿಚಾರಣೆಃ ಸಹಾಯಕ ಸರ್ಕಾರಿ ಅಭಿಯೋಜಕರವರಿಂದಃ**

ಈಗ ಸುಮಾರು 2 ವರ್ಷಗಳ ಹಿಂದೆ ನಾನು ತೋರಣಗಲ್ಲ ಪೊಲೀಸ್ ಠಾಣೆ ಬೇರೆ ಕೆಲಸಕ್ಕೆ ಹೋದಾಗ ಪೋಲಿಸರು ಕೇಲವೊಂದು ದಾಖಲಾತಿಗಳ ಮೇಲೆ ನನ್ನ ಸಹಿ ಪಡೆದುಕೊಂಡಿರುತ್ತಾರೆ. ಯಾವ ಕಾರಣಕ್ಕೆ ಸಹಿ ಮಾಡಿರುತ್ತೇನೆ ಎಂದು ನನಗೆ ಗೊತ್ತಿಲ್ಲ. ಪೋಲಿಸರು ನನ್ನ ಸಮಕ್ಷಮ ಯಾವುದೇ ಪಂಚನಾಮೆಯನ್ನು ಮಾಡಿರುವುದಿಲ್ಲ ಮತ್ತು ಯಾವುದೇ ವಸ್ತುಗಳನ್ನು ಜಪ್ತಿ ಪಡಿಸಿಕೊಂಡಿರುವುದಿಲ್ಲ. ಸಾಕ್ಷಿಯು ನಿಪಿ 1 ಮತ್ತು 2 ರಲ್ಲಿ ತನ್ನ ಸಹಿಗಳನ್ನು ನೋಡಿ ಗುರುತಿಸಿದ್ದು ಅವುಗಳನ್ನು ನಿಪಿ-1(ಬಿ) ಮತ್ತು ನಿಪಿ-2(ಬಿ) ಎಂದು ಗುರುತಿಸಲಾಯಿತು. ನಿಪಿ-1 ಮತ್ತು 2 ರಲ್ಲಿ ಬರೆದಿರುವ ವಿಷಯ ನನಗೆ ಗೊತಿಲ್ಲ.

**(ಈ ಹಂತದಲ್ಲಿ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀ ಸವಾಲು ಮಾಡಲು ಸ.ಸ.ಅ. ರವರು ಅನುಮತಿ ಕೋರಿರುತ್ತಾರೆ. ಆದ್ದರಿಂದ ಅವರಿಗೆ ಅನುಮತಿ ನೀಡಲಾಯಿತು)**

**ಪಾಟಿ ಸವಾಲು : ಸ.ಸ. ಅ. ರವರಿಂದ:**

ದಿ.06-11-2023 ರಂದು ಪೊಲೀಸ್‌ರು ನನ್ನನ್ನು ಮತ್ತು ಚಾಸಾ-3 ರವರು ಬರಮಾಡಿಕೊಂಡು ಬನ್ನಿಹಟ್ಟಿ ಗ್ರಾಮದ ನಾಗಲಾಪುರಕ್ಕೆ ಹೋಗುವ ರಸ್ತೆಯ ಸಾರ್ವಜನಿಕ ಸ್ಥಳದಲ್ಲಿ ಆರೋಪಿಯ ಮೇಲೆ ದಾಳಿ ಮಾಡಿ ಅವರಿಂದ ಮದ್ಯವನ್ನು ಜಪ್ತು ಪಡೆಸಿಕೊಂಡು ನಮ್ಮ ಸಮಕ್ಷಮ ಮಃ4.20 ರಿಂದ 5.20 ರವರೆಗೆ ಪಂಚನಾಮೆ ಮಾಡಿ, ಕಚ್ಚಾ ನಕಾಶೆಯನ್ನು ತಯಾರಿ ನಮ್ಮ ಸಹಿ ಪಡೆದಿರುತ್ತಾರೆ ಎಂದರೆ ಸರಿಯಲ್ಲ. ನಿಪಿ-1

ಮತ್ತು 2 ರಲ್ಲಿ ಇರುವ ವಿಷಯ ಗೊತ್ತಿದ್ದರು ಸಹ ಆರೋಪಿಗೆ ಸಹಾಯ ಮಾಡಲು ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಅಂದರೆ ಸರಿಯಲ್ಲ.

**ಪಾಟೀ ಸವಾಲುಃ ಆರೋಪಿ ಪರಃ ಇಲ್ಲ.**

**ಮರು ವಿಚಾರಣೆಃ ಇಲ್ಲ.**

( ಈ ಸಾಕ್ಷಿಯ ಹೇಳಿಕೆಯನ್ನು ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತ ಲೇಖನದಲ್ಲಿ ಹೇಳಿ ಬೆರಳಚ್ಚು ಮಾಡಿಸಲಾಯಿತು )

ಓ. ಹೆ. ಕೆ.ಸರಿ ಇದೆ.

ಪ್ರ.ದ.ನ್ಯಾ.ದಂಡಾಧಿಕಾರಿಗಳು,
**ಸಂಡೂರು.**